ಇರುವುದಿಲ್ಲ. ಐ.ಸಿ.ಯು ಘಟಕ ಪ್ರಾರಂಭಿಸಲು ಸಾಧನೆ ಸಲಕರಣೆಗಳ ಖರೀದಿ ಪ್ರಕ್ರಿಯೇ ನಡೆಯುತ್ತಿದೆ. ಸಾಧನ ಸಲಕರಣೆಗಳು ಸರಬರಾಜು ಆದ ನಂತರ ಇಲ್ಲಿಯೂ ಸಹ ಐ.ಸಿ.ಯು ಘಟಕರ ಪ್ರಾರಂಭಿಸಲಾಗುವುದು.

ಜಯನಗರ ಜನರಲ್ ಆಸ್ಪತ್ರೆಯಲ್ಲಿ 47 ವೈದ್ಯರ ಹುದ್ದೆ ಮಂಜೂರಾಗಿದ್ದು, 43 ಹುದ್ದೆಗಳು ಭರ್ತಿಯಾಗಿದ್ದು, 3 ಹುದ್ದೆಗಳು ಖಾಲಿ ಇವೆ. ಹಾಗೂ 5 ಜನ ತಜ್ಞ ವೈದ್ಯರುಗಳು ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ 47 ತಜ್ಞ ವೈದ್ಯರ ಹುದ್ದೆಯಲ್ಲಿ 30 ಜನ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಹಾಗೂ ಗುತ್ತಿಗೆ ಆಧಾರದಲ್ಲಿ 5 ತಜ್ಞ ವೈದ್ಯರುಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಇ) ತಜ್ಞ ವೈದ್ಯರುಗಳ ಹುದ್ದೆ ಭರ್ತಿ ಮತ್ತು ಸ್ಥಳಾವಕಾಶದ ಲಭ್ಯತೆ ನೋಡಿಕೊಂಡು ಈ ಇನ್ನೂ ಹೆಚ್ಚು ಐ.ಸಿ.ಯು. ಘಟಕಗಳನ್ನು ಸ್ಥಾಪಿಸಲು ಪರಿಶೀಲಿಸಲಾಗುವುದು.

ರಾಣೆಬೆನ್ನೂರಿನಲ್ಲಿ ಹೊಸದಾಗಿ ಎ.ಆರ್.ಟಿ.ಓ. ಆಫೀಸ್ ಪ್ರಾರಂಭಿಸುವುದು

195(147); ಶ್ರೀ ಕೋಳಿವಾಡ ಕೆ.ಬಿ. (ರಾಣೆಬೆನ್ನೂರು)

ಅ) ರಾಣೆಬೆನ್ನೂರಿನಲ್ಲಿ ಎ.ಆರ್.ಟಿ.ಓ. ಆಫೀಸನ್ನು ಪ್ರಾರಂಭಿಸುವ ಪ್ರಸ್ತಾವನೆಯು ಯಾವ ಹಂತದಲ್ಲಿದೆ ಮತ್ತು ಎಂದಿನಿಂದ ಕಾರ್ಯಾರಂಭ ಮಾಡಲಿದೆ.

ಆ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ) ಸಾರಿಗೆ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆಯಿದ್ದು, ನೇಮಕಾತಿ ಪ್ರಕ್ರಿಯೆಯು ಈ ಕೆಳಕಂಡ ಆಡಳಿತಾತ್ಮಕ ಕಾರಣಗಳಿಗಾಗಿ ವಿಳಂಬವಾಗಿರುತ್ತದೆ.

1) ಹೈದರಾಬಾದ್–ಕರ್ನಾಟಕದ ಅಭ್ಯರ್ಥಿಗಳಿಗೆ ಮೀಸಲಾತಿಯನ್ನು ಕಾಯ್ದಿರಿಸುವುದು.(371–ಜೆ)

2) ಮೋಟಾರು ವಾಹನ ನಿರೀಕ್ಷಕರುಗಳ ನೇಮಕಾತಿಯ ಬಗ್ಗೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿನ ತಡೆಯಾಜ್ಞೆ ಇರುವುದು.

ಇದರ ಜೊತೆಗೆ ಹಾಲಿ ಇರುವ ಸಿಬ್ಬಂದಿಯಲ್ಲಿಯೇ ಕಛೇರಿಯ ಕೆಲಸಕಾರ್ಯಗಳು, ಜಾರೀಘಟಕ ಮತ್ತು ತನಿಖಾ ಠಾಣೆಗಳ ಕೆಲಸಗಳನ್ನು ಸಹ ನಿರ್ವಹಿಸಬೇಕಾಗಿರುತ್ತದೆ.

ಮೇಲ್ಕಂಡ ಕಾರಣಗಳಿಂದಾಗಿ 2013–14ನೇ ಸಾಲಿನಲ್ಲಿ ಮಂಜೂರಾಗಿರುವ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಗಳನ್ನು ಪೂರ್ಣಪ್ರಮಾಣದಲ್ಲಿ ಕಾರ್ಯಚರಣೆಗೊಳಿಸಲು ಸಾಧ್ಯವಾಗಿರುವುದಿಲ್ಲ.

ಆದ್ದರಿಂದ ರಾಣೇಬೆನ್ನೂರಿನಲ್ಲಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಯನ್ನು ಪ್ರಾರಂಭ ಮಾಡುವ ಪ್ರಸ್ತಾವನೆ ಸದ್ಯಕ್ಕೆ ಇರುವುದಿಲ್ಲ.

ಆ) ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ರಾಣೇಬೆನ್ನೂರಿನಲ್ಲಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಯನ್ನು ಪ್ರಾರಂಭ ಮಾಡುವ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಮುಂದಿರುವುದಿಲ್ಲ.

ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ